**ಕರ್ನಾಟಕ ಸರ್ಕಾರ**

ಸಂಖ್ಯೆ: RDPR/10/GPA/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹು ಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:28-02-2022.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

**ಇವರಿಗೆ:**

1. ಆಯುಕ್ತರು,
   ಪಂಚಾಯತ್ ರಾಜ್ ಆಯುಕ್ತಾಲಯ,
   ಬೆಂಗಳೂರು.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
   ಎಲ್ಲಾ ಜಿಲ್ಲಾ ಪಂಚಾಯಿತಿಗಳು.

ಮಾನ್ಯರೆ,

**ವಿಷಯ:** ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿನ ಒಂದು ಎಕರಗಿಂತ ಕಡಿಮೆ ಇರುವ ಪ್ರದೇಶ ಮತ್ತು ಏಕನಿವೇಶನ ವಸತಿ / ವಸತಿಯೇತರಗಾಗಿ ಭೂ ಪರಿವರ್ತಿತ ಜಮೀನುಗಳಲ್ಲಿನ ವಿನ್ಯಾಸ ಅನುಮೋದನೆಗಾಗಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅನುಮೋದನೆ ಪಡೆಯುವ ಬಗ್ಗೆ.

**ಉಲ್ಲೇಖ:**

1) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 886 ಗ್ರಾಪಂಅ 2014 ದಿನಾಂಕ: 11-11-2014.
2) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 132 ಗ್ರಾಪಂಅ 2015 ದಿನಾಂಕ: 19-03-2015.
3) ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ: DPAL 36 SHASANA 2021, DATED:07-10-2021

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರಲ್ಲಿ ಸ್ಥಳೀಯ ಯೋಜನಾ ಪ್ರದೇಶದ ಹೊರಗಡೆ ಭೂ ಪರಿವರ್ತಿತ ಜಮೀನುಗಳಲ್ಲಿ ಬಡಾವಣೆಗಾಗಿ ವಿನ್ಯಾಸ ಅನುಮೋದನೆ ಮಾಡಲು ಅನುಸರಿಸಬೇಕಾದ ವಿಧಾನಗಳ ಬಗ್ಗೆ ಕೈಪಿಡಿಯಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಅದರಂತೆ ತಾಲ್ಲೂಕು ಪಂಚಾಯತಿಗಳು ಮತ್ತು ಗ್ರಾಮ ಪಂಚಾಯತಿಗಳು ಅನುಸರಿಸಬೇಕಾದ ವಿಧಾನಗಳ ಬಗ್ಗೆ ಸವಿವರವಾಗಿ ತಿಳಿಸಲಾಗಿತ್ತು.

ಉಲ್ಲೇಖ (2) ರಲ್ಲಿ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿನ ಭೂ ಪರಿವರ್ತಿತ ಜಮೀನುಗಳಲ್ಲಿನ ವಿನ್ಯಾಸ ಅನುಮೋದನೆಗಾಗಿ ಅನುಸರಿಸಬೇಕಾದ ವಿಧಾನಗಳಲ್ಲಿ ವಿನಾಯಿತಿ ನೀಡಲಾಗಿತ್ತು.

ಉಲ್ಲೇಖ (3) ರ ಅಧಿಸೂಚನೆಯಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ಅಧಿನಿಯಮ, 2021, ದಿನಾಂಕ:05-07-2021 ರಿಂದ ಜಾರಿಗೆ ಬಂದಿದ್ದು, ಪ್ರಕರಣ 4 ಕೆ ಹೊಸದಾಗಿ ಸೇರ್ಪಡೆ ಮಾಡಲಾಗಿದ್ದು, ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿದ ಪ್ರದೇಶದಲ್ಲಿ ಭೂ ಅಭಿವೃದ್ಧಿ ಬಗ್ಗೆ ಉಪಬಂಧ ಕಲ್ಪಿಸಲಾಗಿದ್ದು, ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿದ ಯಾವುದೇ ಭೂಮಿಯ ಮೇಲೆ ಅಭಿವೃದ್ಧಿಯನ್ನು ಕೈಗೊಳ್ಳಲು ಉದ್ದೇಶಿಸಿರುವ ಯಾರೇ ವ್ಯಕ್ತಿಯು ಅನುಮತಿಗಾಗಿ ಸ್ಥಳೀಯ ಪ್ರಾಧಿಕಾರಕ್ಕೆ ಲಿಖಿತ ಅರ್ಜಿಯನ್ನು ಸಲ್ಲಿಸತಕ್ಕದ್ದು. ಸ್ಥಳೀಯ ಪ್ರಾಧಿಕಾರವು ಅನುಮತಿ ನೀಡುವ ಮೊದಲು ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಅಥವಾ ಅವರಿಂದ ಅಧಿಕೃತಗೊಂಡು ನಗರ ಯೋಜನೆ ಸಹಾಯಕ ನಿರ್ದೇಶಕರ ದರ್ಜೆಗೆ ಕಡಿಮೆಯಲ್ಲದ ಯಾರೇ ಅಧೀನ ಅಧಿಕಾರಿಯ ಪೂರ್ವಾನುಮೋದನೆಯನ್ನು ಪಡೆಯತಕ್ಕದ್ದು ಎಂದು ತಿಳಿಸಲಾಗಿದೆ.

**ಉಲ್ಲೇಖ (1) ರ ಸರ್ಕಾರದ ಪತ್ರ ಮತ್ತು ಉಲ್ಲೇಖ (2) ರ ಸರ್ಕಾರದ ಸುತ್ತೋಲೆಯನ್ನು ಹಿಂಪಡೆಯಲಾಗಿದೆ. ಉಲ್ಲೇಖ (3) ರ ಅಧಿಸೂಚನೆಯಂತೆ** ಗ್ರಾಮ ಪಂಚಾಯತಿಗಳು ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿನ ಒಂದು ಎಕರಗಿಂತ ಕಡಿಮೆ ಇರುವ ಪ್ರದೇಶ ಮತ್ತು ಏಕನಿವೇಶನ ವಸತಿ / ವಸತಿಯೇತರಗಾಗಿ ಭೂ ಪರಿವರ್ತಿತ ಜಮೀನುಗಳಲ್ಲಿನ ವಿನ್ಯಾಸ ಅನುಮೋದನೆಗಾಗಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅನುಮೋದನೆ ಪಡೆದು ಕ್ರಮ ವಹಿಸುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

28/2/22

(ರಾಜು ಎಂ. ಎಂ.)
ಸರ್ಕಾರದ ಅಧೀನ ಕಾರ್ಯದರ್ಶಿ, (ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

28/2/22

**<u>ಪ್ರತಿ ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ:</u>**

1) ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
3) ನಿರ್ದೇಶಕರು, (ಇ-ಆಡಳಿತ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4) ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
5) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
6) ಇಲಾಖಾ ವೆಬ್‌ಸೈಟ್ ನಲ್ಲಿ ಅಳವಡಿಸಲು.